ಇಹಲೋಕದಲ್ಲಿ ರೇಷ್ಮೆ ಧರಿಸಿದವನು ಪರಲೋಕದಲ್ಲಿ ಅದನ್ನು ಧರಿಸುವುದಿಲ್ಲ

ಉಮರ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಇಹಲೋಕದಲ್ಲಿ ರೇಷ್ಮೆ ಧರಿಸಿದವನು ಪರಲೋಕದಲ್ಲಿ ಅದನ್ನು ಧರಿಸುವುದಿಲ್ಲ."
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಇಹಲೋಕದಲ್ಲಿ ರೇಷ್ಮೆ ಧರಿಸುವ ಪುರುಷರು ಅದಕ್ಕಾಗಿ ಪಶ್ಚಾತ್ತಾಪಪಡದಿದ್ದರೆ, ಅವರು ಪರಲೋಕದಲ್ಲಿ ಅದನ್ನು ಧರಿಸುವುದಿಲ್ಲ. ಇದು ಅವರಿಗಿರುವ ಶಿಕ್ಷೆಯಾಗಿದೆ.

http://www.sunnah.global/hadeeth/kn/show/2986